ಉತ್ತರ

ಅ) ಹೌದು

ಆ) ಸರ್ಕಾರದ ಪರಿಶೀಲನೆಯಲ್ಲಿದೆ.

ಶಿವಮೊಗ್ಗ ನಗರ ಒಳಚರಂಡಿ ವ್ಯವಸ್ಥೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 96(316)

ಸದಸ್ಯರ ಹೆಸರು: ಶ್ರೀ ಚಂದ್ರಶೇಖರಪ್ಪ ಹೆಚ್.ಎಂ.(ಶಿವಮೊಗ್ಗ)

ಉತ್ತರಿಸುವ ಸಚಿವರು: ಶ್ರೀ ಎಸ್.ಎಂ.ಕೃಷ್ಣ(ಮುಖ್ಯ ಮಂತ್ರಿಯವರು)

ಪ್ರಶ್ನೆ

ಅ) ಶಿವಮೊಗ್ಗ ನಗರದಲ್ಲಿ ಒಳಚರಂಡಿ ವ್ಯವಸ್ಥೆಯು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಬಂದಿದ್ದಲ್ಲಿ ಒಳಚರಂಡಿ ವ್ಯವಸ್ಥೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮವೇನು?

ಉತ್ತರ

ಅ) ಶಿವಮೊಗ್ಗ ನಗರದ ಹಳೇ ಪ್ರದೇಶಗಳಿಗೆ ಒಳಚರಂಡಿ ವ್ಯವಸ್ಥೆಯನ್ನು ಈಗಾಗಲೇ ಒದಗಿಸಲಾಗಿದೆ. ಹೊಸ ಬಡಾವಣೆಗಳಿಗೆ ಒಳಚರಂಡಿ ವ್ಯವಸ್ಥೆಯನ್ನು ಒದಗಿಸಬೇಕಾಗಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಆ) ಶಿವಮೊಗ್ಗ ನಗರಕ್ಕೆ ವ್ಯವಸ್ಥಿತವಾದ ಒಳಚರಂಡಿ ಯೋಜನೆಯ ಸರ್ವೆ ಕಾರ್ಯಕ್ಕಾಗಿ ನಗರ ಸಭೆಯವರು ರೂ.4.45 ಲಕ್ಷಗಳನ್ನು ಮಂಡಲಿಗೆ ತುಂಬ ಬೇಕಾಗಿರುತ್ತದೆ. ಆದಾಗ್ಯೂ ಸಹ ಶಿವಮೊಗ್ಗ ನಗರಾಭಿವೃದ್ಧಿ ಪ್ರಾಧಿಕಾರದ ಬಡಾವಣೆಗಳಿಗೂ ಒಳಚರಂಡಿ ವ್ಯವಸ್ಥೆಯನ್ನು ಒದಗಿಸುವ ಸಲುವಾಗಿ ವಿವರವಾದ ಅಂದಾಜು ತಯಾರಿಸಲು ಕಿರ್ಲೋಸ್ಕರ್ ಕನ್ಸ್ಲ್ಟೆಂಟ್ ಸಂಸ್ಥೆಗೆ ವಹಿಸಲಾಗಿದ್ದು, ಕಾರ್ಯ ಸಾಧ್ಯತಾ ವರದಿಯನ್ನು ರೂ.40 ಕೋಟಿಗಳಿಗೆ ಸಲ್ಲಿಸಿರುತ್ತಾರೆ. ತಾಂತ್ರಿಕ ಪರಿಶೀಲನೆ ನಂತರ ಹಾಗೂ ಪುರಸಭೆಯವರು ರೂ.4.45 ಲಕ್ಷಗಳನ್ನು ಮಂಡಲಿಗೆ

ತುಂಬಿದ ಕೂಡಲೇ ಶೀಘ್ರದಲ್ಲಿ ವಿವರವಾದ ಅಂದಾಜನ್ನು ತಯಾರಿಸಿ ನಂತರ ಆಡಳಿತಾತ್ಮಕ ಅನುಮೋದನೆ ನೀಡಲಾಗುವುದು.

ಮೈಸೂರು ಮಹಾ ನಗರ ಪಾಲಿಕೆಯಲ್ಲಿರುವ ಗುತ್ತಿಗೆ/ದಿನಗೂಲಿ ನೌಕರರ ಕುರಿತು.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 97(319)

ಸದಸ್ಯರ ಹೆಸರು: ಶ್ರೀ ಶಂಕರಲಿಂಗೇಗೌಡ ಹೆಚ್.ಎಸ್.(ಚಾಮರಾಜ)

ಉತ್ತರಿಸುವ ಸಚಿವರು: ಶ್ರೀ ಬಿ.ಬಿ.ಚಿಮ್ಮನಕಟ್ಟಿ(ನಗರಾಭಿವೃದ್ಧಿ ಸಚಿವರು)

ಪ್ರಶ್ನೆ

ಅ) ಮೈಸೂರು ಮಹಾನಗರ ಪಾಲಿಕೆಯಲ್ಲಿ ಗುತ್ತಿಗೆ : ದಿನಗೂಲಿ ಆಧಾರದ ಮೇಲೆ ಕೆಲಸ ನಿರ್ವಹಿಸುತ್ತಿರುವ ನೌಕರರ ಹೆಸರುಗಳನ್ನು ಒದಗಿಸುವುದು?

ಆ) ಇವರು ಎಷ್ಟು ವರ್ಷಗಳಿಂದ ಕೆಲಸ ನಿರ್ವಹಿಸುತ್ತಿರುವರು?

ಇ) ಇವರುಗಳನ್ನು ಖಾಯಂಗೊಳಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ?

ಉತ್ತರ

ಅ) ಪಟ್ಟಿ ಲಗತ್ತಿಸಿದೆ.

ಆ) 10-15 ವರ್ಷಗಳಿಂದ.

ಇ) ಈ ಎಲ್ಲಾ ನೌಕರರು 1986ರ ನಂತರ ನೇಮಕಾತಿಗೊಂಡವರಾಗಿದ್ದಾರೆ. ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯು ಹೊರಡಿಸುವ ಸರ್ಕಾರದ ಆದೇಶಗಳ ಪ್ರಕಾರ ಈ ನೌಕರರುಗಳನ್ನು ಖಾಯಂಗೊಳಿಸಲಾಗಿರುವುದಿಲ್ಲ. ಆದಾಗ್ಯೂ, ಮೈಸೂರು ಮಹಾನಗರ ಪಾಲಿಕೆಯ ಕೌನ್ಸಿಲ್‌ನವರು ಈ ಬಗ್ಗೆ ನಿರ್ಣಯ ತೆಗೆದುಕೊಂಡಿದ್ದು ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು.